# ಯೊವಾನನ್ನು ಬರೆದ ಮೊದಲನೆಯ ಪತ್ರ

## ಮುನ್ನುಡಿ

ಯೊವಾನ್ನನು ಬರೆದ ಮೊದಲನೆಯ ಪತ್ರದ ಉದ್ದೇಶಗಳು ಎರಡು: 1. ಜನರು ದೇವರ ಹಾಗೂ ದೇವರ ಪುತ್ರ ಯೇಸುಕ್ರಿಸ್ತರ ಅನ್ಯೋನ್ಯತೆಯಲ್ಲಿ ಬಾಳಬೇಕೆಂದು ಪ್ರೋತ್ಸಾಹಿಸುವುದು. 2. ಈ ಅನ್ಯೋನ್ಯ ಬಾಳ್ವೆಗೆ ಭಂಗತರುವ ಹುಸಿಬೋಧಕರ ಬಗ್ಗೆ ಜನರಿಗೆ ಎಚ್ಚರಿಕೆ ನೀಡುವುದು.

ಈ ಪತ್ರವನ್ನು ಬರೆದ ಸಂದರ್ಭದಲ್ಲಿ ಸುಳ್ಳುಬೋಧಕರ ಪ್ರಭಾವ ಹೆಚ್ಚಾಗಿತ್ತು. ಭೌತಿಕ ಜಗತ್ತಿನೊಂದಿಗೆ ಸಂಪರ್ಕವಿರುವುದರಿಂದ ಮನುಷ್ಯನಿಗೆ ಉಂಟಾಗುವುದು ಕೇಡೇ ಹೊರತು ಒಳಿತಲ್ಲ. ಎಂತಲೇ ಕಳಂಕಗೊಳಿಸುವ ಜಗತ್ತಿನಲ್ಲಿ ದೇವರ ಪುತ್ರ ಯೇಸುಸ್ವಾಮಿ ನಿಜಕ್ಕೂ ಹುಟ್ಟಿ ಬಾಳಿರಲು ಸಾಧ್ಯವಿಲ್ಲ ಎಂದು ಕೆಲವರು ವಾದಿಸುತ್ತಿದ್ದರು: ಮತ್ತೆ ಕೆಲವರು, ಆ ಜೀವೋದ್ಧಾರ ಹೊಂದಬೇಕಾದರೆ ನಾವು ಐಹಿಕ ಜೀವನದ ಆಶೆ ಆಕಾಂಕ್ಷೆಗಳನ್ನು ಕಿತ್ತೆಸೆಯಬೇಕು. ಪರಪ್ರೀತಿಗೂ ಜೀವೋದ್ಧಾರಕ್ಕೂ ಯಾವ ಸಂಬಂಧವೂ ಇಲ್ಲ ಎನ್ನುತ್ತಿದ್ದರು.

ಇದಕ್ಕೆ ತದ್ವಿರುದ್ಧವಾಗಿ ಯೊವಾನ್ನನು ಸರಳವಾದ ಶೈಲಿಯಲ್ಲಿ ಬರೆಯುತ್ತಾ, ಯೇಸುಸ್ವಾಮಿ ಮನುಷ್ಯ ಆದುದು ಸತ್ಯಸ್ಯಸತ್ಯ. ಅವರಲ್ಲಿ ವಿಶ್ವಾಸವಿಟ್ಟು ದೇವರನ್ನು ಪ್ರೀತಿಸುವ ಎಲ್ಲರೂ ಒಬ್ಬೊರನ್ನೊಬ್ಬರು ಪ್ರೀತಿಸಲೇಬೇಕು ಎಂದು ಸಮರ್ಥಿಸುತ್ತಾನೆ.

**ಪರಿವಿಡಿ**


| | | |
|---|---|---|
| ಪೀಠಿಕೆ | – | 1.1 – 1.4 |
| ಬೆಳಕು ಮತ್ತು ಕತ್ತಲು | – | 1.5 – 2.29 |
| ದೇವರ ಮಕ್ಕಳು ಮತ್ತು ಸೈತಾನನ ಮಕ್ಕಳು | – | 3.1 – 3.24 |
| ಸತ್ಯ ಮತ್ತು ಅಸತ್ಯ | – | 4.1 – 4.6 |
| ಪ್ರೀತಿಸಬೇಕಾದ ಕರ್ತವ್ಯ | – | 4.7 – 4.21 |
| ವಿಶ್ವಾಸದ ವಿಜಯ | – | 5.1 – 5.21 |


**ಪೀಠಿಕೆ**

**1** ನಿಮಗೆ ನಾವು ಪ್ರಚುರಪಡಿಸುವ ಸಜೀವವಾಣಿ ಆದಿಯಿಂದ ಇರುವಂಥಾದ್ದು. ಇದನ್ನು ಕಣ್ಣಾರೆ
ಕಂಡಿದ್ದೇವೆ, ಕಿವಿಯಾರೆ ಕೇಳಿದ್ದೇವೆ, ಮನಸ್ಸಾರೆ ಗ್ರಹಿಸಿದ್ದೇವೆ ಮತ್ತು ಕೈಯಾರೆ ಮುಟ್ಟಿದ್ದೇವೆ. [2]ಆ ಜೀವ
ಪ್ರತ್ಯಕ್ಷವಾಯಿತು. ಅದನ್ನು ನಾವು ನೋಡಿದ್ದೇವೆ, ಆ ಬಗ್ಗೆ ಸಾಕ್ಷಿ ಹೇಳುತ್ತೇವೆ. ಪಿತನ ಬಳಿಯಿದ್ದು ನಮಗೆ
ಪ್ರತ್ಯಕ್ಷವಾದಂಥ ನಿತ್ಯಜೀವವನ್ನು ನಿಮಗೆ ಸಾರುತ್ತೇವೆ. [3]ಪಿತನೊಡನೆಯೂ ಅವರ ಪುತ್ರ
ಕ್ರಿಸ್ತಯೇಸುವಿನೊಡನೆಯೂ ನಮಗಿರುವಂಥ ಅನ್ಯೋನ್ಯತೆಯಲ್ಲಿ ನೀವು ಸಹ ಭಾಗಿಗಳಾಗುವಂತೆ ನಾವು
ಕಂಡುಕೇಳಿದ್ದನ್ನು ನಿಮಗೆ ಪ್ರಚುರಪಡಿಸುತ್ತೇವೆ. [4]ನಮ್ಮೆಲ್ಲರ ಆನಂದವು ಪರಿಪೂರ್ಣವಾಗುವಂತೆ ಇದನ್ನು
ಬರೆಯುತ್ತಿದ್ದೇವೆ.

**ದೇವರೇ ಬೆಳಕು**

5 ದೇವರೇ ಬೆಳಕು. ಅವರಲ್ಲಿ ಕತ್ತಲು ಎಂಬುದೇ ಇಲ್ಲ. ಅವರ ಪುತ್ರನಿಂದಲೇ ನಾವು ಕೇಳಿದ ಈ
ಸಂದೇಶವನ್ನು ನಿಮಗೆ ಸಾರುತ್ತಿದ್ದೇವೆ. [6]ನಾವು ಕತ್ತಲಲ್ಲಿ ಬಾಳುತ್ತಾ ದೇವರೊಡನೆ ಅನ್ಯೋನ್ಯವಾಗಿದ್ದೇವೆಂದು

ಹೇಳಿದರೆ ನಾವು ಸುಳ್ಳುಗಾರರು, ಸತ್ಯಕ್ಕನುಸಾರ ಬಾಳದವರು. 7ಬದಲಿಗೆ, ದೇವರು ಬೆಳಕಿನಲ್ಲಿರುವಂತೆ
ನಾವೂ ಬೆಳಕಿನಲ್ಲಿ ನಡೆದರೆ ನಮ್ಮಲ್ಲಿ ಪರಸ್ಪರ ಅನ್ಯೋನ್ಯತೆ ಇರುತ್ತದೆ. ಆಗ ದೇವರ ಪುತ್ರನಾದ ಯೇಸುವಿನ
ರಕ್ತವು ನಮ್ಮನ್ನು ಎಲ್ಲ ಪಾಪದಿಂದಲೂ ಶುದ್ಧಗೊಳಿಸುತ್ತದೆ.

8 ನಮ್ಮಲ್ಲಿ ಪಾಪವಿಲ್ಲವೆಂದು ನಾವು ಹೇಳಿಕೊಂಡರೆ, ನಮ್ಮನ್ನು ನಾವೇ ವಂಚಿಸಿಕೊಳ್ಳುತ್ತೇವೆ ಮತ್ತು
ಸತ್ಯವೆಂಬುದೇ ನಮ್ಮಲ್ಲಿ ಇರುವುದಿಲ್ಲ. 9ಪ್ರತಿಯಾಗಿ, ನಮ್ಮ ಪಾಪಗಳನ್ನು ಒಪ್ಪಿಕೊಂಡರೆ, ಆಗ ನಂಬಿಕಸ್ಥರೂ
ನೀತಿವಂತರೂ ಆದ ದೇವರು ನಮ್ಮ ಪಾಪಗಳನ್ನು ಕ್ಷಮಿಸಿ ಎಲ್ಲಾ ಅನೀತಿ-ಅಧರ್ಮಗಳಿಂದ ನಮ್ಮನ್ನು
ಶುದ್ಧೀಕರಿಸುತ್ತಾರೆ. 10ನಾವು ಪಾಪ ಮಾಡಲಿಲ್ಲವೆಂದು ಹೇಳಿದರೆ ದೇವರನ್ನು ಸುಳ್ಳುಗಾರರನ್ನಾಗಿಸುತ್ತೇವೆ
ಮತ್ತು ಅವರ ವಾಣಿ ನಮ್ಮಲ್ಲಿ ಇರುವುದಿಲ್ಲ.

### ಪರಿಹಾರ ಬಲಿ

**2** ಪ್ರಿಯ ಮಕ್ಕಳೇ, ನೀವು ಪಾಪ ಮಾಡಬಾರದೆಂದೇ ನಾನಿದನ್ನು ನಿಮಗೆ ಬರೆಯುತ್ತಿದ್ದೇನೆ. ಒಂದು ವೇಳೆ
ಯಾರಾದರೂ ಪಾಪಮಾಡಿದ್ದೇ ಆದರೆ ನಮ್ಮ ಪರವಾಗಿ ಪಿತನ ಬಳಿಯಲ್ಲಿ ಬಿನ್ನಯಿಸಲು ಒಬ್ಬರಿದ್ದಾರೆ.
ಅವರೇ ಸತ್ಯಸ್ವರೂಪರಾದ ಯೇಸುಕ್ರಿಸ್ತರು. 2ಅವರೇ ನಮ್ಮ ಪಾಪಗಳನ್ನು ನಿವಾರಿಸುವ ಪರಿಹಾರ
ಬಲಿಯಾಗಿದ್ದಾರೆ. ನಮ್ಮ ಪಾಪಗಳನ್ನು ಮಾತ್ರವಲ್ಲ, ಇಡೀ ಜಗತ್ತಿನ ಪಾಪಗಳನ್ನು ಅವರು ಪರಿಹರಿಸುತ್ತಾರೆ.

3 ನಾವು ದೇವರ ಆಜ್ಞೆಗಳನ್ನು ಕೈಗೊಂಡು ನಡೆದರೆ ಅದರಿಂದಲೇ ಅವರ ಅರಿವು ನಮಗಿದೆ
ಎಂದು ಖಚಿತವಾಗುತ್ತದೆ. 4ದೇವರನ್ನು ಬಲ್ಲೆನೆಂದು ಹೇಳಿಕೊಳ್ಳುತ್ತಾ ಅವರ ಆಜ್ಞೆಗಳನ್ನು ಕೈಗೊಳ್ಳದೆ
ಇರುವವನು ಸುಳ್ಳುಗಾರ ಮತ್ತು ಸತ್ಯವೆಂಬುದೇ ಅವನಲ್ಲಿ ಇರುವುದಿಲ್ಲ. 5ಆದರೆ ದೇವರ ವಾಕ್ಯವನ್ನು
ಕೈಗೊಂಡು ನಡೆಯುವವನಲ್ಲಿ ಪ್ರೀತಿ ನಿಜಕ್ಕೂ ಸಿದ್ಧಿಗೆ ಬಂದಿರುತ್ತದೆ. 6ತಾನು ದೇವರಲ್ಲಿ ನೆಲೆಸಿದ್ದೇನೆಂದು
ಹೇಳುವವನು ಕ್ರಿಸ್ತಯೇಸು ಜೀವಿಸಿದಂತೆಯೇ ಜೀವಿಸಬೇಕು. ಇದರಿಂದಲೇ ನಾವು ದೇವರಲ್ಲಿ
ನೆಲೆಗೊಂಡಿದ್ದೇವೆಂದು ತಿಳಿದುಕೊಳ್ಳುತ್ತೇವೆ.

### ಆಜ್ಞೆ

7 ಪ್ರಿಯರೇ, ನಾನು ನಿಮಗೆ ಬರೆಯುತ್ತಿರುವುದು ಹೊಸ ಆಜ್ಞೆಯೇನೂ ಅಲ್ಲ, ಮೊದಲಿನಿಂದಲೂ
ನೀವು ಪಡೆದಿರುವ ಹಳೆಯ ಆಜ್ಞೆಯೇ. ಈ ಆಜ್ಞೆಯೇ ನೀವು ಈಗಾಗಲೇ ಕೇಳಿರುವ ಸಂದೇಶ. 8ಆದರೂ
ನಾನೀಗ ನಿಮಗೆ ಬರೆಯುತ್ತಿರುವುದು ಒಂದು ವಿಧದಲ್ಲಿ ಹೊಸ ಆಜ್ಞೆಯೇ ಸರಿ. ಅದರ ನೈಜಗುಣವು
ಕ್ರಿಸ್ತಯೇಸುವಿನಲ್ಲಿ ಬೆಳಗಿದಂತೆ, ನಿಮ್ಮ ಜೀವನದಲ್ಲೂ ಬೆಳಗುತ್ತದೆ. ಏಕೆಂದರೆ, ಕತ್ತಲು ಕಳೆದುಹೋಗುತ್ತಿದೆ;
ನಿಜವಾದ ಬೆಳಕು ಈಗಾಗಲೇ ಪ್ರಕಾಶಿಸುತ್ತಿದೆ.

9 "ನಾನು ಬೆಳಕಿನಲ್ಲಿದ್ದೇನೆ" ಎಂದು ಹೇಳಿಕೊಂಡು ತನ್ನ ಸಹೋದರನನ್ನು ದ್ವೇಷಿಸುವವನು
ಇನ್ನೂ ಕತ್ತಲಲ್ಲೇ ಇದ್ದಾನೆ. 10ತನ್ನ ಸಹೋದರನನ್ನು ಪ್ರೀತಿಸುವವನಾದರೋ ಬೆಳಕಿನಲ್ಲಿ
ನೆಲೆಗೊಂಡಿರುತ್ತಾನೆ. ಎಡವಿ ಪಾಪದಲ್ಲಿ ಬೀಳಿಸುವಂಥದ್ದೇನೂ ಅವನಲ್ಲಿ ಇರದು. 11ತನ್ನ ಸಹೋದರನನ್ನು
ದ್ವೇಷಿಸುವವನು ಕತ್ತಲಲ್ಲಿ ಇದ್ದಾನೆ; ಕತ್ತಲಲ್ಲೇ ನಡೆಯುತ್ತಾನೆ. ಕತ್ತಲು ಅವನನ್ನು ಕುರುಡಾಗಿಸಿರುವುದರಿಂದ
ಎತ್ತ ಹೋಗುತ್ತಿದ್ದಾನೆಂದು ಅವನಿಗೇ ತಿಳಿಯದು.

12 ಬರೆಯುತಿಹೆನು ಪ್ರಿಯಮಕ್ಕಳಿರಾ, ಇದನ್ನು
ಏಕೆನೆ, ಕ್ರಿಸ್ತ ನಾಮದ ನಿಮಿತ್ತ
ಕ್ಷಮಿಸಲಾಯಿತು ನಿಮ್ಮ ಪಾಪಗಳನ್ನು.
13 ಬರೆಯುತ್ತಿಹೆನು ತಂದೆಗಳಿರಾ, ಇದನ್ನು
ಏಕೆನೆ, ಬಲ್ಲವರಾದಿರಿ
ಆದಿಯಿಂದಿರುವಾತನನ್ನು.
ಬರೆಯುತಿಹೆನು ಯುವಜನರಿರಾ, ಇದನ್ನು

ಏಕೆನೆ, ನೀವು ಜಯಿಸಿದ್ದಾಯಿತು
ಆ ಕಡುಗೇಡಿಗನನ್ನು.
14 ಬರೆದಿಹೆನು ಮಕ್ಕಳಿರಾ, ಇದನ್ನು
ಏಕೆನೆ, ಬಲ್ಲವರಾದಿರಿ ಪರಮ ಪಿತನನ್ನು.
ಬರೆದಿಹೆನು ಶಕ್ತಿಯುತ
ಯುವಜನರಿರಾ, ಇದನ್ನು
ಏಕೆನೆ, ನೆಲೆಗೊಳಿಸಿರುವಿರಿ
ನಿಮ್ಮಲ್ಲಿ ದೈವವಾಕ್ಯವನ್ನು.
ಮಾತ್ರವಲ್ಲ, ನೀವು ಜಯಿಸಿದ್ದಾಯಿತು
ಆ ಕಡುಗೇಡಿಗನನ್ನು.

15 ಲೋಕಕ್ಕೂ ಲೌಕಿಕವಾದವುಗಳಿಗೂ ನೀವು ಒಲಿಯಬಾರದು. ಈ ಲೋಕವನ್ನು ಒಲಿದರೆ ಪಿತನಲ್ಲಿ ನಿಮಗೆ ಒಲವಿಲ್ಲವೆಂದಾಯಿತು. 16ಲೋಕಸಂಬಂಧವಾದ ದೈಹಿಕ ದುರಿಚ್ಛೆ, ಕಣ್ಣಿನ ಕಾಮುಕತೆ, ಐಶ್ವರ್ಯದ ಅಹಂಭಾವ – ಇಂಥವು ಪಿತನಿಂದ ಬಂದುವಲ್ಲ, ಲೋಕದಿಂದಲೇ ಬಂದುವು. 17ಲೋಕವೂ ಅದರ ವ್ಯಾಮೋಹವೂ ಗತಿಸಿ ಹೋಗುವುದು. ಆದರೆ ದೇವರ ಚಿತ್ತವನ್ನು ನೆರವೇರಿಸುವವನು ಚಿರಂಜೀವಿಯಾಗಿ ಬಾಳುವನು.

## ಸತ್ಯದಿಂದ ಸುಳ್ಳು ಜನಿಸದು

18 ನನ್ನ ಪ್ರಿಯ ಮಕ್ಕಳೇ, ಅಂತಿಮ ಕಾಲ ಸಮೀಪಿಸಿತು. ಕ್ರಿಸ್ತವಿರೋಧಿ ಬರುವನೆಂದು ನೀವು ಕೇಳಿದ್ದೀರಿ. ಈಗಾಗಲೇ ಅನೇಕ ಕ್ರಿಸ್ತ ವಿರೋಧಿಗಳು ತಲೆದೋರಿದ್ದಾರೆ. ಇದರಿಂದ ಅಂತಿಮಕಾಲ ಸನ್ನಿಹಿತವಾಯಿತೆಂದು ನಮಗೆ ತಿಳಿದುಬರುತ್ತದೆ. 19ಈ ಕ್ರಿಸ್ತವಿರೋಧಿಗಳು ನಮ್ಮವರಾಗಿರಲಿಲ್ಲ. ಆದಕಾರಣ, ಅವರು ನಮ್ಮನ್ನು ತೊರೆದರು. ಅವರು ನಮ್ಮವರೇ ಆಗಿದ್ದರೆ, ನಮ್ಮೊಂದಿಗೇ ಇರುತ್ತಿದ್ದರು. ಆದರೆ ಅವರು ನಮ್ಮನ್ನು ತೊರೆದು ಹೋದರು. ಇದರಿಂದ ಕ್ರೈಸ್ತರೆನಿಸಿಕೊಳ್ಳುವವರೆಲ್ಲರೂ ನಮ್ಮವರಲ್ಲ ಎಂಬುದು ಸ್ಪಷ್ಟವಾಗಿ ಕಂಡುಬರುತ್ತದೆ.

20 ನೀವಾದರೋ ಪರಿಶುದ್ಧವಾದವರಿಂದ ಅಭಿಷಿಕ್ತರಾಗಿದ್ದೀರಿ. ಸತ್ಯವನ್ನು ಅರಿತವರಾಗಿದ್ದೀರಿ. 21ನೀವು ಸತ್ಯವನ್ನು ಅರಿಯದವರೆಂದು ಭಾವಿಸಿ ನಾನು ಬರೆಯುತ್ತಿಲ್ಲ, ನೀವು ಸತ್ಯವನ್ನು ಅರಿತವರು; ಸತ್ಯದಿಂದ ಸುಳ್ಳು ಜನಿಸದೆಂಬುದನ್ನು ತಿಳಿದವರು. ಆದುದರಿಂದ ನಾನು ನಿಮಗೆ ಬರೆದಿದ್ದೇನೆ.

22 ಅಸತ್ಯವಾದಿ ಎಂದರೆ ಯಾರು? ಯೇಸುವೇ ಕ್ರಿಸ್ತ ಎಂಬುದನ್ನು ಯಾರು ಅಲ್ಲಗಳೆಯುತ್ತಾನೋ ಅವನೇ ಅಸತ್ಯವಾದಿ; ಅವನೇ ಕ್ರಿಸ್ತವಿರೋಧಿ. ಅವನು ಪಿತನನ್ನು ಮತ್ತು ಪುತ್ರನನ್ನು ತಿರಸ್ಕರಿಸುತ್ತಾನೆ. 23ಪುತ್ರನನ್ನು ತಿರಸ್ಕರಿಸುವವನು ಪಿತನನ್ನೂ ತಿರಸ್ಕರಿಸುತ್ತಾನೆ. ಪುತ್ರನನ್ನು ಅಂಗೀಕರಿಸುವವನು ಪಿತನನ್ನೂ ಅಂಗೀಕರಿಸುತ್ತಾನೆ.

24 ಮೊದಲಿನಿಂದಲೂ ನೀವು ಯಾವ ಸಂದೇಶವನ್ನು ಕೇಳಿದ್ದೀರೋ ಅದು ನಿಮ್ಮಲ್ಲಿ ನೆಲೆಸಲಿ. ಮೊದಲಿನಿಂದಲೂ ನೀವು ಕೇಳಿದ ಸಂದೇಶ ನಿಮ್ಮಲ್ಲಿ ನೆಲೆಸಿದರೆ ಪುತ್ರನಲ್ಲಿಯೂ ಪಿತನಲ್ಲಿಯೂ ನೀವು ನೆಲೆಸುತ್ತೀರಿ. 25ಕ್ರಿಸ್ತಯೇಸು ನಮಗೆ ವಾಗ್ದಾನ ಮಾಡಿರುವ ನಿತ್ಯಜೀವ ಇದೇ.

26 ನಿಮ್ಮನ್ನು ಸನ್ಮಾರ್ಗದಿಂದ ತಪ್ಪಿಸಬೇಕೆಂದಿರುವವರನ್ನು ಕುರಿತು ಇದನ್ನು ನಿಮಗೆ ಬರೆದಿದ್ದೇನೆ. 27ನೀವು ಕ್ರಿಸ್ತಯೇಸುವಿನಿಂದ ಅಭಿಷಿಕ್ತರಾಗಿದ್ದೀರಿ. ಆ ಅಭಿಷೇಕವು ನಿಮ್ಮಲ್ಲಿ ನೆಲೆಸಿದೆ. ಆದ್ದರಿಂದ ಯಾರೂ ನಿಮಗೆ ಬೋಧಿಸುವ ಅವಶ್ಯಕತೆಯಿಲ್ಲ. ಆ ಅಭಿಷೇಕವೇ ನಿಮಗೆ ಎಲ್ಲವನ್ನೂ ಬೋಧಿಸುತ್ತಾ ಬರುತ್ತದೆ. ಈ ಬೋಧನೆ ಸತ್ಯವಾದುದು, ಮಿಥ್ಯವಾದುದಲ್ಲ. ಅದರ ಪ್ರಕಾರವೇ ಕ್ರಿಸ್ತಯೇಸುವಿನಲ್ಲಿ ನೆಲೆಸಿರಿ.

28 ಹೌದು ಪ್ರಿಯ ಮಕ್ಕಳೇ, ಕ್ರಿಸ್ತಯೇಸು ಪ್ರತ್ಯಕ್ಷರಾಗುವಾಗ, ಅವರ ಪುನರಾಗಮನದ ಪ್ರಯುಕ್ತ ಅವರ ಮುಂದೆ ನಾವು ನಾಚಿಕೆ ಪಡದೆ ಧೈರ್ಯದಿಂದಿರುವಂತೆ ಅವರಲ್ಲಿ ನೆಲೆಗೊಂಡಿರೋಣ.

29 ಕ್ರಿಸ್ತಯೇಸು ಸತ್ಯಸ್ವರೂಪಿ ಎಂಬುದನ್ನು ನೀವು ಬಲ್ಲಿರಿ. ಎಂದೇ, ಸತ್ಯಮಾರ್ಗದಲ್ಲಿ ನಡೆಯುವ
ಪ್ರತಿಯೊಬ್ಬನೂ ಅವರಿಂದ ಜನಿಸಿದವನು ಎಂಬುದು ನಿಮಗೆ ವೇದ್ಯವಾಗಿರಬೇಕು.

### ದೇವರ ಮಕ್ಕಳು

**3** ನಾವು ದೇವರ ಮಕ್ಕಳು ಎನಿಸಿಕೊಂಡಿರಬೇಕಾದರೆ ಪಿತನು ನಮ್ಮನ್ನು ಎಷ್ಟಾಗಿ ಪ್ರೀತಿಸುತ್ತಾರೆಂಬುದನ್ನು
ಗಮನಿಸಿರಿ. ನಿಜಕ್ಕೂ ನಾವು ದೇವರ ಮಕ್ಕಳೇ. ಲೋಕವು ಅವರನ್ನು ಅರಿತುಕೊಳ್ಳಲಿಲ್ಲವಾದ ಕಾರಣ ನಾವು
ಎಂಥವರೆಂದು ಅದು ಅರಿತಿಲ್ಲ. [2]ಪ್ರಿಯರೇ, ನಾವೀಗ ದೇವರ ಮಕ್ಕಳು. ಮುಂದೆ ನಾವು ಎಂಥವರಾಗುತ್ತೇವೆ
ಎಂಬುದು ಇನ್ನೂ ವಿಷದವಾಗಿಲ್ಲ. ಆದರೆ ಕ್ರಿಸ್ತಯೇಸು ಪ್ರತ್ಯಕ್ಷವಾಗುವಾಗ ನಾವೂ ಅವರಂತೆಯೇ
ಇರುತ್ತೇವೆಂದು ಬಲ್ಲೆವು. ಏಕೆಂದರೆ, ಅವರನ್ನು ನಾವು ಅವರ ಯಥಾರ್ಥ ರೂಪದಲ್ಲೇ ಕಾಣುತ್ತೇವೆ.
[3]ಕ್ರಿಸ್ತಯೇಸುವಿನಲ್ಲಿ ನಂಬಿಕೆ ನಿರೀಕ್ಷೆಯನ್ನಿಟ್ಟಿರುವ ಪ್ರತಿಯೊಬ್ಬನೂ ಅವರು ಶುದ್ಧರಾಗಿರುವಂತೆಯೇ ತನ್ನನ್ನು
ಶುದ್ಧವಾಗಿಟ್ಟುಕೊಳ್ಳುತ್ತಾನೆ.

4 ಪಾಪಮಾಡುವ ಪ್ರತಿಯೊಬ್ಬನೂ ದೇವರ ಆಜ್ಞೆಯನ್ನು ಮೀರುತ್ತಾನೆ. ದೇವರ ಆಜ್ಞೆಯನ್ನು
ಉಲ್ಲಂಘಿಸುವುದೇ ಪಾಪ. [5]ಪಾಪರಹಿತರಾದ ಕ್ರಿಸ್ತಯೇಸು ಪಾಪಪರಿಹಾರ ಮಾಡಲೆಂದೇ
ಕಾಣಿಸಿಕೊಂಡರೆಂದು ನೀವು ಬಲ್ಲಿರಿ. [6]ಅವರಲ್ಲಿ ನೆಲೆಸಿರುವ ಪ್ರತಿಯೊಬ್ಬನೂ ಪಾಪಮಾಡನು. ಪಾಪ
ಮಾಡುವವನು ಅವರನ್ನು ಕಂಡವನೂ ಅಲ್ಲ, ಅರಿತವನೂ ಅಲ್ಲ.

7 ಪ್ರಿಯ ಮಕ್ಕಳೇ, ನಿಮ್ಮನ್ನು ಸನ್ಮಾರ್ಗದಿಂದ ತಪ್ಪಿಸುವುದಕ್ಕೆ ಯಾರಿಗೂ ಅವಕಾಶ ಕೊಡಬೇಡಿ.
ಕ್ರಿಸ್ತಯೇಸು ಸತ್ಯಸ್ವರೂಪಿಯಾಗಿರುವಂತೆಯೇ ಸತ್ಯಕ್ಕನುಸಾರ ನಡೆಯುವ ಪ್ರತಿ ಒಬ್ಬನೂ ಸತ್ಯವಂತನೇ.
[8]ಪಾಪಮಾಡುವವನು ಸೈತಾನನ ಸಂತಾನದವನು. ಸೈತಾನನು ಆದಿಯಿಂದಲೂ ಪಾಪಮಾಡಿದವನೇ. ಅವನ
ದುಷ್ಕೃತ್ಯಗಳನ್ನು ವಿನಾಶಗೊಳಿಸಲೆಂದೇ ದೇವರ ಪುತ್ರ ಕಾಣಿಸಿಕೊಂಡದ್ದು.

9 ದೇವರಿಂದ ಜನಿಸಿದ ಯಾವನೂ ಪಾಪಮಾಡನು. ದೇವರ ಜೀವದ ಕುಡಿ ಅವನಲ್ಲಿರುವುದು.
ಅವನು ಪಾಪದಲ್ಲಿ ಜೀವಿಸನು. ಏಕೆಂದರೆ, ಅವನು ದೇವರಿಂದ ಜನಿಸಿದವನು. [10]ಸನ್ಮಾರ್ಗದಲ್ಲಿ
ನಡೆಯದವನೂ ಸಹೋದರರನ್ನು ಪ್ರೀತಿಸದವನೂ ದೇವರಿಂದ ಜನಿಸಿದವನಲ್ಲ. ಹೀಗೆ ದೇವರ ಮಕ್ಕಳು
ಯಾರು ಮತ್ತು ಸೈತಾನನ ಮಕ್ಕಳು ಯಾರು ಎಂಬುದನ್ನು ತಿಳಿಯಬಹುದು.

### ಪ್ರೀತಿ ಬರಿಯ ಬಾಯಿಮಾತಾಗದಿರಲಿ

11 ನಾವು ಒಬ್ಬರನ್ನೊಬ್ಬರು ಪ್ರೀತಿಸಬೇಕು ಎಂಬುದೇ ಮೊತ್ತಮೊದಲಿನಿಂದಲೂ ನೀವು ಕೇಳಿದ
ಸಂದೇಶ. [12]ತನ್ನ ಸಹೋದರನನ್ನೇ ಕೊಂದ ಕಾಯಿನನಂತೆ ನಾವು ಇರಬಾರದು. ಅವನು ಕಡುಕೇಡಿಗನ
ಕುವರ. ಅವನು ಕೊಂದುದಾದರೂ ಏಕೆ? ತನ್ನ ಕೃತ್ಯಗಳು ದುಷ್ಟವಾಗಿದ್ದು ತನ್ನ ಸಹೋದರನ ಕೃತ್ಯಗಳು
ಧರ್ಮಿಷ್ಠವಾಗಿದ್ದುದರಿಂದ ಅಲ್ಲವೇ?

13 ಸಹೋದರರೇ, ಲೋಕವು ನಿಮ್ಮನ್ನು ದ್ವೇಷಿಸಿದರೆ ಆಶ್ಚರ್ಯಪಡಬೇಡಿ. [14]ನಾವು ನಮ್ಮ
ಸಹೋದರರನ್ನು ಪ್ರೀತಿಸುವುದರಿಂದ ಸಾವಿನಿಂದ ಜೀವಕ್ಕೆ ಸಾಗಿದ್ದೇವೆಂದು ತಿಳಿದಿದ್ದೇವೆ. ಪ್ರೀತಿಸದೆ
ಇರುವವನು ಸಾವಿನಲ್ಲೇ ನೆಲೆಸಿರುತ್ತಾನೆ. [15]ತನ್ನ ಸಹೋದರರನ್ನು ದ್ವೇಷಿಸುವವನು ಕೊಲೆಗಾರನೇ ಹೌದು.
ಯಾವ ಕೊಲೆಗಾರನಲ್ಲೂ ನಿತ್ಯ ಜೀವ ಇರದೆಂದು ನೀವು ಬಲ್ಲಿರಿ. [16]ಕ್ರಿಸ್ತಯೇಸು ನಮಗೋಸ್ಕರ ತಮ್ಮ
ಪ್ರಾಣವನ್ನೇ ತೆತ್ತರು. ಇದರಿಂದ ಪ್ರೀತಿ ಎಂತಹುದೆಂದು ನಾವು ಅರಿತುಕೊಂಡೆವು. ನಾವೂ ಕೂಡ
ಸಹೋದರರಿಗಾಗಿ ಪ್ರಾಣಾರ್ಪಣೆ ಮಾಡಲು ಬದ್ಧರಾಗಿದ್ದೇವೆ. [17]ಲೋಕದ ಸುಖಸಂಪತ್ತುಳ್ಳ ಒಬ್ಬನು,
ಕುಂದು ಕೊರತೆಯಲ್ಲಿ ಸಿಲುಕಿರುವ ತನ್ನ ಸಹೋದರನನ್ನು ಕಂಡಾಗಲೂ ಮನಕರಗದಿದ್ದರೆ ಅವನಲ್ಲಿ
ದೇವರ ಪ್ರೀತಿ ಹೇಗೆ ತಾನೇ ನೆಲೆಸೀತು? [18]ಪ್ರಿಯಮಕ್ಕಳೇ, ನಾವು ಬರಿಯ ಮಾತಿನಿಂದಾಗಲಿ,
ಬಾಯುಪಚಾರದಿಂದಾಗಲಿ, ಪ್ರೀತಿಸುವವರಾಗಿರಬಾರದು. ನಮ್ಮ ಪ್ರೀತಿ ಸತ್ಯದಲ್ಲೂ ಕೃತ್ಯದಲ್ಲೂ
ವ್ಯಕ್ತವಾಗಬೇಕು.

## ದೇವರ ಆಜ್ಞೆ

19 ಹೀಗೆ ನಾವು ಸತ್ಯಕ್ಕೆ ಸೇರಿದವರು ಎಂಬುದು ಮನದಟ್ಟಾಗುವುದಲ್ಲದೆ ದೇವರ ಮುಂದೆ ನಮ್ಮ
ಮನಸ್ಸು ನೆಮ್ಮದಿಯಿಂದಿರುತ್ತದೆ. [20]ಯಾವ ವಿಷಯದಲ್ಲಾದರೂ ನಮ್ಮ ಮನಸ್ಸಾಕ್ಷಿ ನಮ್ಮನ್ನು ಖಂಡಿಸಿದ್ದೇ
ಆದರೆ ಎಲ್ಲವನ್ನೂ ಬಲ್ಲ ದೇವರು ನಮ್ಮ ಮನಸ್ಸಾಕ್ಷಿಗಿಂತಲೂ ದೊಡ್ಡವರೆಂಬುದು ನಮಗೆ ತಿಳಿದೇ ಇರುತ್ತದೆ.
[21]ಪ್ರಿಯರೇ, ನಮ್ಮ ಮನಸ್ಸಾಕ್ಷಿ ನಮ್ಮನ್ನು ಖಂಡಿಸದಿದ್ದರೆ, ನಾವು ದೇವರ ಮುಂದೆ ಧೈರ್ಯದಿಂದಿರಲು
ಸಾಧ್ಯವಾಗುತ್ತದೆ. [22]ನಾವು ದೇವರ ಆಜ್ಞೆಗಳಿಗೆ ವಿಧೇಯರಾಗಿ ಅವರಿಗೆ ಮೆಚ್ಚುಗೆಯಾದವುಗಳನ್ನೇ
ಮಾಡುವುದರಿಂದ ನಾವು ಕೋರುವುದೆಲ್ಲವನ್ನೂ ಅವರಿಂದ ಪಡೆಯುತ್ತೇವೆ. [23]ನಾವು ದೇವರ ಪುತ್ರ
ಯೇಸುಕ್ರಿಸ್ತರ ನಾಮದಲ್ಲಿ ವಿಶ್ವಾಸವಿಟ್ಟು ಅವರು ವಿಧಿಸಿದಂತೆ ಒಬ್ಬರನ್ನೊಬ್ಬರು ಪ್ರೀತಿಸಬೇಕು. ಇದೇ ಅವರ
ಆಜ್ಞೆ. ದೇವರ ಆಜ್ಞೆಯನ್ನು ಪಾಲಿಸುವವನು ಅವರಲ್ಲಿ ನೆಲೆಸಿರುತ್ತಾನೆ. ದೇವರೂ ಅವನಲ್ಲಿ ನೆಲೆಸಿರುತ್ತಾರೆ.
ದೇವರು ನಮ್ಮಲ್ಲಿ ನೆಲೆಸಿದ್ದಾರೆಂದು ಅವರು ದಯಪಾಲಿಸುವ ಪವಿತ್ರಾತ್ಮರಿಂದಲೇ ತಿಳಿದುಕೊಳ್ಳುತ್ತೇವೆ.

## ಸತ್ಯಾತ್ಮ – ದುರಾತ್ಮ

**4** ಪ್ರಿಯರೇ, “ನಾವು ಪವಿತ್ರಾತ್ಮ ಪ್ರೇರಿತರು” ಎಂದು ಹೇಳುವ ಎಲ್ಲರನ್ನೂ ನಂಬಬಾರದು. ಆ ಪ್ರೇರಣೆ
ದೇವರಿಂದ ಬಂದಿದೆಯೇ ಎಂದು ಪರೀಕ್ಷಿಸಿ ನೋಡಬೇಕು. ಏಕೆಂದರೆ, ಎಷ್ಟೋ ಮಂದಿ ಕಪಟ
ಪ್ರವಾದಿಗಳು ಎಲ್ಲೆಡೆಯಲ್ಲೂ ಹರಡಿದ್ದಾರೆ. [2]ದೇವರ ಆತ್ಮದಿಂದ ಬಂದ ಪ್ರೇರಣೆಯನ್ನು ನೀವು ಹೀಗೆ
ಗುರುತಿಸಬಹುದು: ಮನುಷ್ಯ ಆಗಿ ಬಂದ ಕ್ರಿಸ್ತಯೇಸುವನ್ನು ಒಪ್ಪಿಕೊಳ್ಳುವ ಆತ್ಮವು ದೇವರಿಂದ
ಪ್ರೇರಿತವಾದುದು. [3]ಯೇಸುವನ್ನು ಒಪ್ಪಿಕೊಳ್ಳದ ಆತ್ಮ ದೇವರಿಂದ ಪ್ರೇರಿತವಾದುದಲ್ಲ. ಅದು ಕ್ರಿಸ್ತ
ವಿರೋಧಿಯ ಆತ್ಮ. ಅದು ಬರುವುದೆಂದು ನೀವು ಕೇಳಿದ್ದೀರಿ; ಈಗಾಗಲೇ ಅದು ಲೋಕದಲ್ಲಿ ತಲೆದೋರಿದೆ.
4 ಪ್ರಿಯ ಮಕ್ಕಳೇ, ನೀವಂತೂ ದೇವರಿಗೆ ಸೇರಿದವರು. ಲೋಕದಲ್ಲಿರುವ ದುರಾತ್ಮಕ್ಕಿಂತಲೂ
ನಿಮ್ಮಲ್ಲಿರುವ ಆತ್ಮವು ಶ್ರೇಷ್ಠವಾದುದು. ಆದ್ದರಿಂದಲೇ ಆ ಕಪಟ ಪ್ರವಾದಿಗಳನ್ನು ಜಯಿಸಿದ್ದೀರಿ. [5]ಅವರು
ಲೋಕಕ್ಕೆ ಸೇರಿದವರು. ಆದ್ದರಿಂದ ಅವರು ಲೌಕಿಕವಾದುದನ್ನೇ ಮಾತನಾಡುತ್ತಾರೆ. ಎಂದೇ, ಲೋಕವು
ಅವರಿಗೆ ಕಿವಿಗೊಡುತ್ತದೆ. [6]ನಾವಾದರೋ ದೇವರಿಗೆ ಸೇರಿದವರು. ದೇವರನ್ನು ಅರಿತವನು ನಮಗೆ
ಕಿವಿಗೊಡುತ್ತಾನೆ. ದೇವರಿಗೆ ಸೇರದವನು ನಮಗೆ ಕಿವಿಗೊಡುವುದಿಲ್ಲ. ಇದರಿಂದಲೇ ಸತ್ಯವನ್ನು ಸಾರುವ
ಆತ್ಮ ಯಾವುದು ಮತ್ತು ಅಸತ್ಯವನ್ನು ಸಾರುವ ಆತ್ಮ ಯಾವುದು ಎಂಬುದು ನಮಗೆ ತಿಳಿಯುತ್ತದೆ.

## ದೇವರು ಪ್ರೀತಿಸ್ವರೂಪಿ

7 ಪ್ರಿಯರೇ, ನಾವು ಒಬ್ಬರನ್ನೊಬ್ಬರು ಪ್ರೀತಿಸೋಣ. ಪ್ರೀತಿ ದೇವರಿಂದ ಉಗಮವಾದುದು.
ಪ್ರೀತಿಸುವವನು ದೇವರ ಮಗನು. ಅವನು ದೇವರನ್ನು ಬಲ್ಲವನು. [8]ಪ್ರೀತಿಸದವನು ದೇವರನ್ನು ಬಲ್ಲವನಲ್ಲ.
ಏಕೆಂದರೆ, ದೇವರು ಪ್ರೀತಿಸ್ವರೂಪಿ. [9]ತಮ್ಮ ಏಕೈಕ ಪುತ್ರನ ಮುಖಾಂತರ ನಾವು ಸಜ್ಜೀವವನ್ನು
ಪಡೆಯುವಂತೆ ದೇವರು ಅವರನ್ನು ಲೋಕಕ್ಕೆ ಕಳುಹಿಸಿದರು. ನಮ್ಮ ಮೇಲೆ ದೇವರಿಗಿರುವ ಪ್ರೀತಿ ಹೀಗೆ
ವ್ಯಕ್ತವಾಯಿತು. [10]ನಾವು ದೇವರನ್ನು ಪ್ರೀತಿಸಿದ್ದರಲ್ಲಿ ಅಲ್ಲ, ಅವರು ನಮ್ಮನ್ನು ಪ್ರೀತಿಸಿ ನಮ್ಮ
ಪಾಪನಿವಾರಣಾರ್ಥವಾಗಿ ತಮ್ಮ ಪುತ್ರನನ್ನು ಕಳುಹಿಸಿದ್ದರಲ್ಲಿಯೇ ಪ್ರೀತಿಯ ನಿಜ ಗುಣ ತೋರಿಬರುತ್ತದೆ.
11 ಪ್ರಿಯರೇ, ದೇವರೇ ನಮ್ಮನ್ನು ಇಷ್ಟಾಗಿ ಪ್ರೀತಿಸಿರುವಲ್ಲಿ ನಾವು ಸಹ ಒಬ್ಬರನ್ನೊಬ್ಬರು
ಪ್ರೀತಿಸಲೇಬೇಕು. [12]ದೇವರನ್ನು ಯಾರೂ ಎಂದೂ ನೋಡಿಲ್ಲ. ಆದರೂ ನಾವು ಒಬ್ಬರನ್ನೊಬ್ಬರು ಪ್ರೀತಿಸಿದರೆ
ದೇವರು ನಮ್ಮಲ್ಲಿ ನೆಲೆಸಿರುತ್ತಾರೆ. ಅವರ ಪ್ರೀತಿ ನಮ್ಮಲ್ಲಿ ಸಿದ್ಧಿಗೆ ಬರುತ್ತದೆ.
13 ದೇವರು ನಮಗೆ ತಮ್ಮ ಆತ್ಮವನ್ನು ನೀಡಿರುವುದರಿಂದಲೇ ನಾವು ಅವರಲ್ಲಿಯೂ ಅವರು
ನಮ್ಮಲ್ಲಿಯೂ ನೆಲೆಸಿರುವುದನ್ನು ತಿಳಿದುಕೊಳ್ಳುತ್ತೇವೆ. [14]ಪಿತನು ತಮ್ಮ ಪುತ್ರನನ್ನು ಲೋಕೋದ್ಧಾರಕನನ್ನಾಗಿ
ಕಳುಹಿಸಿಕೊಟ್ಟದ್ದನ್ನು ನಾವು ಕಣ್ಣಾರೆ ಕಂಡಿದ್ದೇವೆ. ಇದರ ವಿಷಯವಾಗಿ ಸಾಕ್ಷಿ ಹೇಳುತ್ತೇವೆ. [15]ಯೇಸುವೇ

ದೇವರ ಪುತ್ರನೆಂದು ಯಾವನು ಒಪ್ಪಿಕೊಳ್ಳುತ್ತಾನೋ ಅವನಲ್ಲಿ ದೇವರು ನೆಲೆಸಿದ್ದಾರೆ; ಅವನೂ ದೇವರಲ್ಲಿ
ನೆಲೆಸಿದ್ದಾನೆ. [16]ಹೀಗೆ ದೇವರು ನಮ್ಮಲ್ಲಿಟ್ಟಿರುವ ಪ್ರೀತಿ ನಮಗೆ ಗೊತ್ತಿದೆ. ಅದರಲ್ಲಿ ನಮಗೆ ವಿಶ್ವಾಸವಿದೆ.

ದೇವರು ಪ್ರೀತಿಸ್ವರೂಪಿ. ಪ್ರೀತಿಯಲ್ಲಿ ನೆಲೆಸಿರುವವನು ದೇವರಲ್ಲಿ ನೆಲೆಸಿದ್ದಾನೆ. ದೇವರೂ ಅವನಲ್ಲಿ
ನೆಲೆಸಿರುತ್ತಾರೆ. [17]ಇದರಿಂದಾಗಿ, ಪ್ರೀತಿ ನಮ್ಮಲ್ಲಿ ಸಿದ್ಧಿಗೆ ಬಂದಿರುತ್ತದೆ; ನ್ಯಾಯತೀರ್ಪಿನ ದಿನದಂದು ನಾವು
ಭರವಸೆಯಿಂದಿರುತ್ತೇವೆ. ಈ ಲೋಕದಲ್ಲಿ ನಮ್ಮ ಬಾಳು ಕ್ರಿಸ್ತಯೇಸುವಿನ ಬಾಳಿನಂತೆ ಇರುವುದರಿಂದಲೇ
ಆ ಭರವಸೆ ನಮಗೆ ಇರುತ್ತದೆ. [18]ಪ್ರೀತಿ ಇರುವಲ್ಲಿ ಭೀತಿ ಇರುವುದಿಲ್ಲ. ಪೂರ್ಣ ಪ್ರೀತಿ ಭೀತಿಯನ್ನು
ಹೊರದೂಡುತ್ತದೆ. ಭೀತಿ ಇರುವಲ್ಲಿ ಯಾತನೆ ಇರುತ್ತದೆ. ಭೀತಿಯಿಂದಿರುವವನು ಪ್ರೀತಿಯಲ್ಲಿ ಸಿದ್ಧಿಗೆ
ಬಂದವನಲ್ಲ.

19 ದೇವರು ನಮ್ಮನ್ನು ಮೊದಲು ಪ್ರೀತಿಸಿದ್ದರಿಂದಲೇ ನಾವು ಪ್ರೀತಿಸುತ್ತೇವೆ. [20]ತಾನು ದೇವರನ್ನು
ಪ್ರೀತಿಸುತ್ತೇನೆಂದು ಒಬ್ಬನು ಹೇಳುತ್ತಾ ತನ್ನ ಸಹೋದರನನ್ನು ದ್ವೇಷಿಸಿದರೆ, ಅವನು ಸುಳ್ಳುಗಾರನಾಗುತ್ತಾನೆ.
ತಾನು ಕಂಡಿರುವ ತನ್ನ ಸಹೋದರನನ್ನು ಪ್ರೀತಿಸದವನು ತಾನು ಕಾಣದಿರುವ ದೇವರನ್ನು ಹೇಗೆ
ಪ್ರೀತಿಸಿಯಾನು? [21]ದೇವರನ್ನು ಪ್ರೀತಿಸುವವನು ತನ್ನ ಸಹೋದರನನ್ನೂ ಪ್ರೀತಿಸಬೇಕೆಂಬುದು ಕ್ರಿಸ್ತಯೇಸು
ನಮಗೆ ಮಾಡಿರುವ ಆಜ್ಞೆ.

### ವಿಶ್ವಾಸದ ವಿಜಯ

**5** ಯೇಸುವೇ 'ಕ್ರಿಸ್ತ' ಎಂದು ವಿಶ್ವಾಸಿಸುವ ಪ್ರತಿಯೊಬ್ಬನೂ ದೇವರ ಮಗು. ತಂದೆಯನ್ನು ಪ್ರೀತಿಸುವವನು
ಆತನ ಮಗುವನ್ನೂ ಪ್ರೀತಿಸುತ್ತಾನೆ. [2]ದೇವರನ್ನು ಪ್ರೀತಿಸಿ, ಅವರ ಆಜ್ಞೆಗಳನ್ನು ಪಾಲಿಸುವುದರಿಂದ ನಾವು
ದೇವರ ಮಕ್ಕಳನ್ನು ಪ್ರೀತಿಸುತ್ತೇವೆಂಬುದು ನಿಶ್ಚಯ ಆಗುತ್ತದೆ. [3]ದೇವರನ್ನು ಪ್ರೀತಿಸುವುದು ಎಂದರೆ ಅವರು
ಕೊಟ್ಟ ಆಜ್ಞೆಗಳನ್ನು ಅನುಸರಿಸಿ ನಡೆಯುವುದೇ. ಅವರ ಆಜ್ಞೆಗಳು ನಮಗೆ ಹೊರೆಯೇನೂ ಅಲ್ಲ.
[4]ದೇವರಿಂದ ಜನಿಸಿದ ಪ್ರತಿ ಒಬ್ಬನೂ ಲೋಕವನ್ನು ಜಯಿಸುತ್ತಾನೆ. ಲೋಕವನ್ನು ಜಯಿಸುವಂಥದು ನಮ್ಮ
ವಿಶ್ವಾಸವೇ. [5]ಯೇಸುವೇ ದೇವರ ಪುತ್ರನೆಂದು ನಂಬಿದವರೇ ಹೊರತು ಲೋಕವನ್ನು ಜಯಿಸಲು ಬೇರೆ
ಯಾರಿಂದ ಸಾಧ್ಯ?

### ತ್ರೈಯೇಕ ಸಾಕ್ಷ್ಯ

6 ಕ್ರಿಸ್ತಯೇಸುವೇ ಜಲ ಮತ್ತು ರಕ್ತದಿಂದ ಸಾಕ್ಷಿಹೊಂದಿದವರು. ಜಲದಿಂದ ಮಾತ್ರವಲ್ಲ, ಜಲ
ಮತ್ತು ರಕ್ತದಿಂದ ಸಾಕ್ಷಿಹೊಂದಿದವರು. [7]ಇದಕ್ಕೆ ಪವಿತ್ರಾತ್ಮ ಸಾಕ್ಷಿ. ಏಕೆಂದರೆ, ಪವಿತ್ರಾತ್ಮ ಸತ್ಯಸ್ವರೂಪಿ. [8]ಹೀಗೆ
ಪವಿತ್ರಾತ್ಮ, ಜಲ ಮತ್ತು ರಕ್ತವೆಂಬ ಮೂರು ಸಾಕ್ಷಿಗಳು ಇವೆ. ಈ ಮೂರೂ ಕೊಡುವ ಸಾಕ್ಷ್ಯ ಒಂದೇ.
[9]ಮನುಷ್ಯರು ಕೊಡುವ ಸಾಕ್ಷ್ಯವನ್ನು ನಾವು ಅಂಗೀಕರಿಸುತ್ತೇವೆ. ದೇವರು ನೀಡುವ ಸಾಕ್ಷ್ಯ ಅದಕ್ಕಿಂತಲೂ
ಶ್ರೇಷ್ಠವಾದುದು. ದೇವರ ಈ ಸಾಕ್ಷ್ಯ ಅವರ ಪುತ್ರನನ್ನು ಕುರಿತದ್ದಾಗಿದೆ. [10]ದೇವರ ಪುತ್ರನಲ್ಲಿ
ವಿಶ್ವಾಸವಿಡುವವನು ಈ ಸಾಕ್ಷ್ಯವನ್ನು ತನ್ನ ಅಂತರಂಗದಲ್ಲೇ ಹೊಂದಿರುತ್ತಾನೆ. ದೇವರಲ್ಲಿ
ವಿಶ್ವಾಸವಿಡದವನಾದರೋ ಅವರನ್ನು ಸುಳ್ಳುಗಾರರನ್ನಾಗಿಸುತ್ತಾನೆ. ಹೇಗೆಂದರೆ, ದೇವರು ತಮ್ಮ ಪುತ್ರನ
ಪರವಾಗಿ ಕೊಟ್ಟ ಸಾಕ್ಷ್ಯದಲ್ಲಿ ಅವನಿಗೆ ನಂಬಿಕೆಯಿಲ್ಲ. [11]ದೇವರು ನಮಗೆ ನಿತ್ಯ ಜೀವವನ್ನು ಅನುಗ್ರಹಿಸಿದ್ದಾರೆ.
ಆ ಜೀವ ಅವರ ಪುತ್ರನಲ್ಲಿದೆ ಎಂಬುದೇ ಈ ಸಾಕ್ಷ್ಯ. [12]ಯಾರಲ್ಲಿ ದೇವರ ಪುತ್ರ ಇದ್ದಾನೋ ಅವನಲ್ಲಿ ಆ
ಜೀವವಿರುತ್ತದೆ. ಯಾರಲ್ಲಿ ದೇವರ ಪುತ್ರನಿಲ್ಲವೋ ಅವನಲ್ಲಿ ಆ ಜೀವ ಇರುವುದಿಲ್ಲ.

### ನಿತ್ಯಜೀವ

13 ದೇವರ ಪುತ್ರನ ನಾಮದಲ್ಲಿ ವಿಶ್ವಾಸ ಇಟ್ಟಿರುವ ನೀವು ನಿತ್ಯಜೀವವನ್ನು ಪಡೆದವರು
ಎಂಬುದನ್ನು ತಿಳಿಸಲೆಂದೇ ನಾನು ನಿಮಗೆ ಇದನ್ನೆಲ್ಲಾ ಬರೆದಿದ್ದೇನೆ. [14]ದೇವರ ಚಿತ್ತಾನುಸಾರ ಏನನ್ನು
ಬೇಡಿಕೊಂಡರೂ ಅವರು ನಮ್ಮ ವಿಜ್ಞಾಪನೆಗೆ ಕಿವಿಗೊಡುತ್ತಾರೆಂಬ ಭರವಸೆ ನಮಗಿದೆ. [15]ನಾವು ಏನನ್ನು

ಬೇಡಿಕೊಂಡರೂ ನಮ್ಮ ವಿಜ್ಞಾಪನೆಗೆ ದೇವರು ಕಿವಿಗೊಡುತ್ತಾರೆ ಎಂಬುದು ನಮಗೆ ತಿಳಿದಿದ್ದರೆ ನಾವು ಬೇಡಿದುದೆಲ್ಲವೂ ನಮಗೆ ಲಭಿಸಿದಂತೆಯೇ ಎಂಬುದೂ ನಮಗೆ ತಿಳಿದಿದೆ.

16 ಮಾರಕವಲ್ಲದ ಪಾಪವೊಂದನ್ನು ಸಹೋದರನು ಮಾಡುವುದನ್ನು ಯಾರಾದರೂ ಕಂಡರೆ, ಆ ಸಹೋದರನಿಗಾಗಿ ದೇವರಲ್ಲಿ ಬೇಡಿಕೊಳ್ಳಿರಿ. ದೇವರು ಆ ಸಹೋದರನಿಗೆ ಸಜ್ಜೀವವನ್ನು ಅನುಗ್ರಹಿಸುವರು. ಮಾರಕವಲ್ಲದ ಪಾಪವನ್ನು ಕುರಿತೇ ಈ ಮಾತನ್ನು ಹೇಳುತ್ತಿದ್ದೇನೆ. ಮಾರಕವಾದ ಪಾಪವೂ ಉಂಟು. ಅದರ ವಿಷಯವಾಗಿ ಬೇಡಿಕೊಳ್ಳಬೇಕೆಂದು ನಾನು ಹೇಳುತ್ತಿಲ್ಲ. [17]ಅಕ್ರಮವಾದುದೆಲ್ಲವೂ ಪಾಪವೇ. ಆದರೆ ಮಾರಕವಲ್ಲದಂಥ ಪಾಪವೂ ಇದೆ.

18 ನಮಗೆ ತಿಳಿದಿರುವಂತೆ ದೇವರಿಂದ ಜನಿಸಿದವನು ಪಾಪಜೀವಿಯಾಗಿರುವುದಿಲ್ಲ. ಏಕೆಂದರೆ, ದೇವರ ಪುತ್ರನ ರಕ್ಷಣೆ ಅವನಿಗಿದೆ. ಕೇಡಿಗನ ಹಿಡಿತಕ್ಕೆ ಅವನು ಸಿಗನು.

19 ಇಡೀ ಲೋಕವು ಕೇಡಿಗನ ವಶದಲ್ಲಿ ಇದ್ದರು ಸಹ ನಾವು ದೇವರಿಗೆ ಸೇರಿದವರೆಂಬುದು ನಮಗೆ ತಿಳಿದಿದೆ.

20 ದೇವರ ಪುತ್ರ ಆಗಮಿಸಿ, ಸತ್ಯ ಸ್ವರೂಪರಾದ ದೇವರನ್ನು ನಾವು ತಿಳಿದುಕೊಳ್ಳುವಂತೆ ನಮಗೆ ಅರಿವನ್ನು ನೀಡಿದ್ದಾರೆ. ಇದನ್ನು ನಾವು ಬಲ್ಲೆವು. ದೇವರ ಪುತ್ರರಾದ ಯೇಸುಕ್ರಿಸ್ತರಲ್ಲಿ ನೆಲೆಸಿರುವ ನಾವು ಸತ್ಯಸ್ವರೂಪಿಯಲ್ಲೇ ನೆಲೆಸಿದ್ದೇವೆ. ನಿಜವಾದ ದೇವರೂ ನಿತ್ಯಜೀವವೂ ಇವರೇ.

21 ಪ್ರಿಯ ಮಕ್ಕಳೇ, ಮಿಥ್ಯ ದೇವರುಗಳಿಂದ ನೀವು ದೂರವಿರಿ.